ಕರ್ನಾಟಕ ಸರ್ಕಾರ

ಸಂಖ್ಯೆ: ಜೆಆರ್‌ಓ(1ಎ)93/2017-18

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ
ಆಯುಕ್ತಾಲಯ, ಆನಂದರಾವ್ ವೃತ್ತ,
ಬೆಂಗಳೂರು, ದಿನಾಂಕ;9 -11-2018

## ಸುತ್ತೋಲೆ

**ವಿಷಯ:** ವೈದ್ಯಾಧಿಕಾರಿಗಳ ಸಂಘದ 29ನೇ ರಾಜ್ಯ ಮಟ್ಟದ ಸಮ್ಮೇಳನದಲ್ಲಿ ಭಾಗವಹಿಸಲು ವಿಶೇಷ ಸಾಂದರ್ಭಿಕ ರಜೆ ಮಂಜೂರಾತಿ ಬಗ್ಗೆ.

**ಉಲ್ಲೇಖ:**
1) ಸರ್ಕಾರದ ಪತ್ರ ಸಂಖ್ಯೆ:ಆಕುಕ/317/ಹೆಚ್‌ಎಸ್‌ಹೆಚ್/2017, ದಿ:30.10.2018.
2) ಕರ್ನಾಟಕ ರಾಜ್ಯ ಸರ್ಕಾರಿ ವೈದ್ಯಾಧಿಕಾರಿಗಳ ಸಂಘ (ನೋಂ) ಇವರ ಪತ್ರ ದಿನಾಂಕ:14.092018

******

ಸರ್ಕಾರಿ ವೈದ್ಯಾಧಿಕಾರಿಗಳ ಸಂಘದ 29ನೇ ರಾಜ್ಯ ಮಟ್ಟದ ಸಮ್ಮೇಳನವು ದಿನಾಂಕ:17.11.2018 ಮತ್ತು 18.11.2018ರಂದು **ದಾವಣಗೆರೆಯಲ್ಲಿ** ನಡೆಯಲಿದ್ದು ಈ ಸಮ್ಮೇಳನದಲ್ಲಿ ವೈದ್ಯಾಧಿಕಾರಿಗಳು ಭಾಗವಹಿಸುವ ಸಲುವಾಗಿ ಈ ಎರಡು ದಿನಗಳಿಗೆ ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡುವಂತೆ ಉಲ್ಲೇಖ(2)ರಲ್ಲಿ ಮನವಿ ಸಲ್ಲಿಸಿರುತ್ತಾರೆ. ಉಲ್ಲೇಖ(1)ರ ಸರ್ಕಾರದ ಪತ್ರದಲ್ಲಿ ನಿಯಮಾನುಸಾರ ಪರಿಶೀಲಿಸಿ ಕ್ರಮಕೈಗೊಳ್ಳಲು ತಿಳಿಸಿರುತ್ತಾರೆ.

ಕರ್ನಾಟಕ ನಾಗರೀಕ ಸೇವಾ ನಿಯಮದ ಅನುಬಂಧ-ಬಿ ನಿಯಮ 13ರಲ್ಲಿ ವಿಶೇಷ ಸಾಂದರ್ಭಿಕ ರಜೆ ನಿಯಮ ಪ್ರಕಾರ ಮೇಲ್ಕಂಡ ದಿನಗಳಂದು ಸಮ್ಮೇಳನದಲ್ಲಿ ಹಾಜರಾಗಲು ಕೆಳಕಂಡ ನಿಬಂಧನೆಗೆ ಒಳಪಟ್ಟು ವಿಶೇಷ ಸಾಂದರ್ಭಿಕ ರಜೆ ಮಂಜೂರು ಮಾಡಿದೆ.

### ನಿಬಂಧನೆಗಳು

1) ಪ್ರಾಥಮಿಕ ಆರೋಗ್ಯ ಕೇಂದ್ರ/ಸಮುದಾಯ ಆರೋಗ್ಯ ಕೇಂದ್ರ/ಸಾರ್ವಜನಿಕ ಆಸ್ಪತ್ರೆ/ಜಿಲ್ಲಾ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಸಾರ್ವಜನಿಕರಿಗೆ ಕನಿಷ್ಠ ಸೇವೆ ಒದಗಿಸುವಲ್ಲಿ ತೊಂದರೆಯಾಗದಂತೆ ನಿಯಂತ್ರಣಾಧಿಕಾರಿಗಳು ಸಮ್ಮೇಳನಕ್ಕೆ ಹಾಜರಾಗಲು ವೈದ್ಯರುಗಳಿಗೆ ಅನುಮತಿ ನೀಡುವುದು.
2) ದಿನಾಂಕ:17.11.2018 ಮತ್ತು 18.11.2018ರಂದು ನಡೆಯುವ ಈ ಸಮ್ಮೇಳನದಲ್ಲಿ ಭಾಗವಹಿಸುವ ವೈದ್ಯಾಧಿಕಾರಿಗಳು ಕಡ್ಡಾಯವಾಗಿ ಹಾಜರಾತಿ ಪತ್ರವನ್ನು ಸಂಬಂಧಿಸಿದ ನಿಯಂತ್ರಣಾಧಿಕಾರಿಗಳಿಗೆ ಸಲ್ಲಿಸತಕ್ಕದ್ದು.
3) ಈ ಸಮ್ಮೇಳನದಲ್ಲಿ ಭಾಗವಹಿಸುವ ವೈದ್ಯಾಧಿಕಾರಿಗಳು ಪ್ರಯಾಣ/ದಿನ ಭತ್ಯೆಗೆ ಅರ್ಹರಿರುವುದಿಲ್ಲ.

"ಕಛೇರಿ ಟಿಪ್ಪಣಿ ಆಯುಕ್ತರಿಂದ
ಅನುಮೋದಿಸಲ್ಪಟ್ಟಿದೆ"

9/11

ಮುಖ್ಯ ಆಡಳಿತಾಧಿಕಾರಿಗಳು
ಆರೋಗ್ಯ ಮತ್ತು ಕು.ಕ.ಸೇವೆಗಳು

**ಪ್ರತಿಯನ್ನು:**

1) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರೋಗ್ಯ ಮತ್ತು ಕು.ಕ ಇಲಾಖೆ ವಿಕಾಸಸೌಧ ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.
2) ಅಧ್ಯಕ್ಷರು/ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ವೈದ್ಯಾಧಿಕಾರಿಗಳ ಸಂಘ ಮಾಗಡಿ ರಸ್ತೆ, ಬೆಂಗಳೂರು ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
3) ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕು.ಕ ಅಧಿಕಾರಿಗಳು/ಜಿಲ್ಲಾ ಶಸ್ತ್ರ ಚಿಕಿತ್ಸಕರು/ವೈದ್ಯಕೀಯ ಅಧೀಕ್ಷಕರು ಇವರ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ ಕಳುಹಿಸಿದೆ.
4) ಎಲ್ಲಾ ರಾಜ್ಯ ಮಟ್ಟದ ಕಾರ್ಯಕ್ರಮಾಧಿಕಾರಿಗಳಿಗೆ ಮಾಹಿತಿಗಾಗಿ ಕಳುಹಿಸಿದೆ.
5) ಸಂಬಂಧಪಟ್ಟವರಿಗೆ.